# ಪ್ರಧಾನ ವ್ಯವಹಾರಿಕ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ

ಸಿಸಿ ಸಂಃ **133/2024**

| | | |
|---|---|---|
| ಸಾಕ್ಷಿಯ ಹೆಸರುಃ | ಸೋಮಶೇಖರ | ಪ್ರಾಸಾಃಃ 2 |
| ತಂದೆ ಹೆಸರುಃ | ನಲ್ಲೂರಯ್ಯ | ಚಾಸಾಃಃ 2 |
| ವಯಸ್ಸುಃ | 50 ವರ್ಷ | ಪ್ರಮಾಣೀಕರಿಸಿದ ದಿಃ 10.07.2026 |
| ಉದ್ಯೋಗಃ | ವ್ಯಾಪಾರ | |
| ವಾಸಸ್ಥಳಃ | ಉಪ್ಪಾರಗೇರಿ, ಪಿರಿಯಾಪಟ್ಟಣ ತಾಲ್ಲೂಕು | |

ಮುಖ್ಯ ವಿಚಾರಣೆಃ ಸಸಅ ರಿಂದಃ

1. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಅಥವಾ ಮಹಜರ್ ಜರುಗಿಸಿರುವುದಿಲ್ಲ. ಸಾಕ್ಷಿಗೆ ಮಹಜರನ್ನು ತೋರಿಸಲಾಗಿ ಸಾಕ್ಷಿಯು ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುಸಿರುತ್ತಾರೆ. ಮಹಜರನ್ನು ನಿಪಿ - 3 ಎಂದು, ಸಾಕ್ಷಿಯ ಸಹಿಯನ್ನು ನಿಪಿ - 3(ಎ) ಎಂದು ಗುರುತಿಲಾಯಿತು. ನನ್ನ ಸಮಕ್ಷಮ ಯಾವುದೇ ಕಚ್ಚಾ ನಕಾಶೆ ತಯಾರಿಸಿರುವುದಿಲ್ಲ. ಸಾಕ್ಷಿಗೆ ಕಚ್ಚಾ ನಕಾಶೆಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಕಚ್ಚಾ ನಕಾಶೆಯನ್ನು ನಿಪಿ-4 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(**ಈ ಸಮಯದಲ್ಲಿ ಸಹಾಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.**)**

ಪಾಟೀ ಸವಾಲುಃ ಸಸಅ ರವರಿಂದಃ

1. ದಿಃ 23.10.2023 ರಂದು ಸಂಜೆ 7.25 ಗಂಟೆ ಸಮಯಕ್ಕೆ ನನ್ನ ವೇ ಬ್ರಿಡ್ಜ್ ಬಳಿ ಆರೋಪಿತನು ತನ್ನ ಬೈಕ್ ಸಂಖ್ಯೆ ಕೆಎ 12 ಡಬ್ಲ್ಯೂ 1806 ಟಿವಿಎಸ್ ರೈಡರ್ ಬೈಕ್ ಅನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಮೈಸೂರು ಬಂಟ್ವಾಳ ರಸ್ತೆಯ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ನಮ್ಮ ಊರಿನ

ಕಳಸಮ್ಮ ಎಂಬುವವರಿಗೆ ಡಿಕ್ಕಿಪಡಿಸಿದ ಪರಿಣಾಮ ಕಳಸಮ್ಮರವರ ತಲೆ, ಕಾಲಿಗೆ ಮತ್ತು ಮೈ, ಕೈಗೆ ರಕ್ತದ ಗಾಯಗಳಾಗಿದ್ದು ಅವರನ್ನು ಪಿರಿಯಾಪಟ್ಟಣ, ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರು ಕೆಆರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಮಾಡಿಸುತ್ತಿದ್ದಾಗ ಚಿಕಿತ್ಸೆ ಫಲಕಾರಿಯಾಗದೇ ಮೃತರಾಗಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಸ್ವತಃ ನಾನು ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ ಮತ್ತು ಅಪಘಾತ ವನ್ನು ಯಾರು ಮಾಡಿರುತ್ತಾರೆ ಎಂಬುದನ್ನು ಸಹ ನೋಡಿರುವುದಿಲ್ಲ ಆದರೆ ಕಳಸಮ್ಮ ಇವರು ಗಾಯಗಳಾಗಿ ಸ್ಥಳದಲ್ಲಿ ಬಿದ್ದಿರುವುದನ್ನು ನೋಡಿರುತ್ತೇನೆ ಮತ್ತು ಮೈಸೂರಿನ ಕೆ ಆರ್ ಆಸ್ಪತ್ರೆಯಲ್ಲಿ ಮೃತರಾದ ಬಗ್ಗೆ ಕೇಳಿರುತ್ತೇನೆ.

2. ದಿಃ 24.10.2023 ರಂದು ಘಟನಾ ಸ್ಥಳದಲ್ಲಿ ಪೊಲೀಸರು ನಾನು ತೆಲುೀರಿಸಿದಂತೆ ಚಾಸಾ-5 ಮತ್ತು 6 ಪಂಚರ ಸಮಕ್ಷಮ ನಿಪಿ-3 ಮತ್ತು 4 ಅನ್ನು ಪೊಲೀಸರು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾನು ಓದಿ ತಿಳಿದುಕೊಂಡು ಸಹಿಯನ್ನು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೊಲೀಸರು ಅಪಘಾತಪಡಿಸಿದ ಮೋಟರ್ ಸೈಕಲನ್ನು ಜಪ್ತುಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಗೆ ತನ್ನ ಹೇಳಿಕೆಯ ಭಾಗವಾದ ' ನಾನು ಮೇಲ್ಲಂಡ ವಿಳಾಸದಲ್ಲಿ ವಾಸವಾಗಿದ್ದು ------------ ಚಾಲನೆಯೇ ಕಾರಣವಾಗಿರುತ್ತದೆ ' ಅನ್ನು ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಅಲ್ಲಗಳೆದಿದ್ದು ಸಾಕ್ಷಿಯ ಒಪ್ಪದ ಹೇಳಿಕೆ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು. ಆರೋಪಿತನಿಗೆ ಸಹಾಯ ಮಾಡುವ ಉದ್ದೇಶದಿಂದ ಮತ್ತು ಪ್ರಕರಣವನ್ನು ನ್ಯಾಯಾಲಯದ ಹೊರಗೆ ಇತ್ಯರ್ಥ ಮಾಡಿದ್ದರಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ಇಲ್ಲ ಎಂದು ನುಡಿಯುತ್ತಾರೆ.

<u>(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದಂತೆ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು.)</u>

ಓ ಹೇ ಕೇ ಸ ಇ ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.
ಪಿರಿಯಾಪಟ್ಟಣ